ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-1**

---

**ಸಂಖ್ಯೆ:-ಎಡಿಎಂ2(1)ಶಿಕ್ಷಕರ ರಾಷ್ಟ್ರ ಪ್ರಶಸ್ತಿ-01/2021-22.** **ದಿನಾಂಕ:01-06-2021.**

**-:ಸುತ್ತೋಲೆ:-**

ವಿಷಯ:-2021 ನೇ ಸಾಲಿನ "ರಾಷ್ಟ್ರ ಮಟ್ಟದ ಉತ್ತಮ ಶಿಕ್ಷಕ" ಪ್ರಶಸ್ತಿಗೆ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವ ಬಗ್ಗೆ.

ಉಲ್ಲೇಖ:-ಜಂಟಿ ಕಾರ್ಯದರ್ಶಿಗಳು(ಇಇ.ಐ),ಮಾನವ ಸಂಪನ್ಮೂಲ ಅಭಿವೃದ್ಧಿ ಇಲಾಖೆ, ಭಾರತ ಸರ್ಕಾರ, ನವದೆಹಲಿ ಇವರ ಪತ್ರ ಸಂಖ್ಯೆ: ಎಫ್. 1-16 /2021-ನ್ಯಾಟ್. ದಿನಾಂಕ: 31-05-2021.

********

2021 ನೇ ಸಾಲಿನ "ರಾಷ್ಟ್ರ ಮಟ್ಟದ ಉತ್ತಮ ಶಿಕ್ಷಕ" ಪ್ರಶಸ್ತಿಗೆ ಅರ್ಹ ಶಿಕ್ಷಕರು / ಮುಖ್ಯ ಶಿಕ್ಷಕರು ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಲು ಉಲ್ಲೇಖದ ಅನುಸಾರ ಭಾರತ ಸರ್ಕಾರದ ಮಾನವ ಸಂಪನ್ಮೂಲ ಅಭಿವೃದ್ಧಿ ಇಲಾಖೆಯು **ದಿನಾಂಕ: 20-06-2021 ರವರೆಗೆ** ಅವಕಾಶ ಕಲ್ಪಿಸಿರುತ್ತದೆ. ಉಲ್ಲೇಖಿತ ಪತ್ರ ಮತ್ತು ತತ್ಸಂಬಂಧಿ ಅಂತರ್ಜಾಲ ತಾಣದಲ್ಲಿನ ಅಂಶಗಳಂತೆ,

1. ರಾಜ್ಯ ಸರ್ಕಾರದ ಅಧೀನದಲ್ಲಿರುವ ಶಾಲೆಗಳು, ಅನುದಾನಿತ ಶಾಲೆಗಳು ಮತ್ತು ಸ್ಥಳೀಯ ಸಂಸ್ಥೆಗಳ ಅಧೀನದಲ್ಲಿರುವ ಶಾಲೆಗಳಲ್ಲಿನ ಖಾಯಂಗೊಂಡ ಮತ್ತು ಮನೆಪಾಠದಲ್ಲಿ ತೊಡಗಿಸಿಕೊಂಡಿರದ ಶಿಕ್ಷಕರು ಮತ್ತು ಮುಖ್ಯ ಶಿಕ್ಷಕರು.
2. ಕೇಂದ್ರ ಸರ್ಕಾರದ ಅಧೀನದಲ್ಲಿರುವ ಶಾಲೆಗಳು ಮತ್ತು ಸಿ.ಬಿ.ಎಸ್.ಇ ಮತ್ತು ಸಿ.ಐ.ಎಸ್.ಸಿ.ಇ ಮಾನ್ಯತೆ ಪಡೆದ ಶಾಲೆಗಳ ಖಾಯಂಗೊಂಡ ಮತ್ತು ಮನೆಪಾಠದಲ್ಲಿ ತೊಡಗಿಸಿಕೊಂಡಿರದ ಶಿಕ್ಷಕರು ಮತ್ತು ಮುಖ್ಯ ಶಿಕ್ಷಕರು.

"ರಾಷ್ಟ್ರ ಮಟ್ಟದ ಉತ್ತಮ ಶಿಕ್ಷಕ" ಪ್ರಶಸ್ತಿಗೆ ಆಯ್ಕೆಯಾಗ ಬಯಸಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ.

3. **https://nationalawardstoteachers.education.gov.in/Login.aspx** ಅಂತರ್ಜಾಲ ತಾಣದ ಮೂಲಕ ಅಥವಾ ಸಾರ್ವಜನಿಕ ಶಿಕ್ಷಣ ಇಲಾಖೆಯ ಅಂತರ್ಜಾಲ ತಾಣ **http://www.schooleducation.kar.nic.in** ದಲ್ಲಿನ ಮೇಲ್ಕಂಡ ವೆಬ್ ತಾಣದ ಕೊಂಡಿಯ ಮೂಲಕ ಅರ್ಹ ಶಿಕ್ಷಕರು / ಮುಖ್ಯ ಶಿಕ್ಷಕರು ತಾವೇ ಸ್ವಯಃ (Self-nomination) ಆನ್‌ಲೈನ್ ಮೂಲಕ ನೋಂದಾಯಿಸಿಕೊಂಡು ಅರ್ಜಿಗಳನ್ನು ಸಲ್ಲಿಸಬೇಕಾಗಿರುತ್ತದೆ.
4. ಅರ್ಹ ಶಿಕ್ಷಕರು / ಮುಖ್ಯ ಶಿಕ್ಷಕರು ಅರ್ಜಿ ಸಲ್ಲಿಸುವ ಪೂರ್ವದಲ್ಲಿ **https://nationalawardstoteachers.education.gov.in/Welcome.aspx** ಅಂತರ್ಜಾಲ ತಾಣದಲ್ಲಿರುವ ತತ್ಸಂಬಂಧಿ ಸೂಚನೆಗಳನ್ನು, ಪದೇ-ಪದೇ ಕೇಳಲಾಗುವ ಪ್ರಶ್ನೆಗಳ (FAQ'S) ಸಹಿತವಾದ ಎಲ್ಲಾ ಅಂಶಗಳನ್ನು ಕಡ್ಡಾಯವಾಗಿ ಓದಿ ಮನನ ಮಾಡಿಕೊಳ್ಳುವುದು.
5. ನಂತರ ಸದರಿ ಅಂತರ್ಜಾಲ ತಾಣದಲಿನ್ಲ ಅರ್ಜಿ ಸಲ್ಲಿಸಲು ಅನುಸರಿಸಬೇಕಾದ ಕಾರ್ಯ ವಿಧಾನವನ್ನು (INSTRUCTION MANUAL FOR ONLINE SELF-NOMINATION ) ಅನುಸರಿಸಿ **https://nationalawardstoteachers.education.gov.in/Login.aspx** ಮೂಲಕ ಅರ್ಹ ಶಿಕ್ಷಕರು / ಮುಖ್ಯ ಶಿಕ್ಷಕರು ತಾವೇ ಸ್ವಯಃ (Self-nomination) ಆನ್‌ಲೈನ್ ಮೂಲಕ

ನೋಂದಾಯಿಸಿಕೊಂಡು ಅರ್ಜಿಗಳನ್ನು ನಿಗದಿತ ಮಿತಿಯ ಪೂರಕ ಮಾಹಿತಿಗಳೊಂದಿಗೆ (ದಾಖಲೆಗಳು, ಆಡಿಯೋ,ವೀಡಿಯೋ ಇತ್ಯಾದಿ...) ನಿಗದಿತ ಅವಧಿಯೊಳಗೆ ಸಲ್ಲಿಸಬಹುದಾಗಿರುತ್ತದೆ.

6. ಅರ್ಹ ಶಿಕ್ಷಕರು / ಮುಖ್ಯ ಶಿಕ್ಷಕರು ಅರ್ಜಿ ಸಲ್ಲಿಸುವ ಪ್ರಕ್ರಿಯೆಯಲ್ಲಿ ಯಾವುದೇ ರೀತಿಯ ಅಡಚಣೆಗಳುಂಟಾದಲ್ಲಿ ಇ-ಮೇಲ್ ಐಡಿ **helpdesk-nat@gov.in** ಯನ್ನು ಸಂಪರ್ಕಿಸಿ ಅಡಚಣೆಗಳನ್ನು ನಿವಾರಿಸಿಕೊಳ್ಳುವುದು.

**2021 ನೇ ಸಾಲಿನ "ರಾಷ್ಟ್ರ ಮಟ್ಟದ ಉತ್ತಮ ಶಿಕ್ಷಕ" ಪ್ರಶಸ್ತಿಗೆ ದಿನಾಂಕ: 20-06-2021 ರವರೆಗೆ ಅರ್ಹ ಶಿಕ್ಷಕರು / ಮುಖ್ಯ ಶಿಕ್ಷಕರು ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿರುವ ಬಗ್ಗೆ ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಉಪನಿರ್ದೇಶಕರು (ಆಡಳಿತ ) ಮತ್ತು (ಅಭಿವೃದ್ಧಿ) ರವರುಗಳು ತಮ್ಮ-ತಮ್ಮ ವ್ಯಾಪ್ತಿಯಲ್ಲಿನ ಶಿಕ್ಷಕರಿಗೆ / ಮುಖ್ಯ ಶಿಕ್ಷಕರಿಗೆ ವ್ಯಾಪಕ ಪ್ರಚಾರದ ಮೂಲಕ ಮತ್ತು ಕಛೇರಿ ಸೂಚನಾ ಫಲಕಯಲ್ಲಿ ಅಳವಡಿಸುವುದರ ಮೂಲಕ ಶಿಕ್ಷಕರ ಗಮನಕ್ಕೆ ತರುವುದು ಮತ್ತು ಕ್ರಮ ಸಂಖ್ಯೆ 1 ರಿಂದ 6 ರವರೆಗಿನ ಅಂಶಗಳನ್ನು ಅನುಸರಿಸಿ ಸುಸೂತ್ರವಾಗಿ ಅರ್ಜಿ ಸಲ್ಲಿಸಲು ಮಾರ್ಗದರ್ಶನ ನೀಡುವುದು.**

ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)

ಇವರಿಗೆ:

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಮತ್ತು (ಅಭಿವೃದ್ಧಿ) ಸಾ.ಶಿ.ಇಲಾಖೆ ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾ.ಶಿ.ಇಲಾಖೆ ಇವರುಗಳಿಗೆ.
3. ಈ ಕಛೇರಿಯ ಹಿರಿಯ ಸಹಾಯಕ ನಿರ್ದೇಶಕರು (ಇ-ಆಡಳಿತ ಘಟಕ) ಇವರಿಗೆ ಇಲಾಖಾ ಅಂತರ್ಜಾಲ ತಾಣದಲ್ಲಿ ಮೇಲ್ಕಂಡಂತೆ ಕೊಂಡಿಯನ್ನು (ಲಿಂಕ್) ಜೋಡಿಸಲು ಮತ್ತು ಮುಖ ಪುಟದಲ್ಲಿ ಪ್ರಕ್ರಿಯೆ ಮುಗಿಯುವವರೆಗೆ ಕಾಣುವಂತೆ ಅಳವಡಿಸಲು.
4. ಈ ಕಛೇರಿಯ ಹಿರಿಯ ಸಹಾಯಕ ನಿರ್ದೇಶಕರು (ಸಾರ್ವಜನಿಕ ಸಂಪರ್ಕ ಮತ್ತು ಶಿಕ್ಷಣ ವಾರ್ತೆ) ಇವರಿಗೆ ಶಿಕ್ಷಣ ವಾರ್ತೆಯಲ್ಲಿ ಪ್ರಕಟಿಸಲು.

ಪ್ರತಿಯನ್ನು ಮಾಹಿತಿಗಾಗಿ,

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ / ಕಲಬುರಗಿ. ಇವರುಗಳಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.
4. ನಿರ್ದೇಶಕರು, (ಪ್ರೌಢಶಿಕ್ಷಣ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
5. ನಿರ್ದೇಶಕರು (ಡಿ.ಎಸ್.ಇ.ಆರ್.ಟಿ), ಬನಸಂಕರಿ ರಿಂಗ್ ರಸ್ತೆ, ಬೆಂಗಳೂರು.
6. ಜಂಟಿ ನಿರ್ದೇಶಕರು,(ಆಡಳಿತ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ಉಪ ನಿರ್ದೇಶಕರು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ, ಶಿಕ್ಷಕರ ಸದನ, ಕೆ.ಜಿ ರಸೆ, ಬೆಂಗಳೂರು.
8. ಎಲ್ಲಾ ಶಿಕ್ಷಕರು / ಮುಖ್ಯ ಶಿಕ್ಷಕರಿಗೆ.
9. ಕಛೇರಿ ಪ್ರತಿ.